## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಹೆಚ್.ವಿ.ರಾಮಚಂದ್ರರಾವ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು ಇವರಿಗೆ ಸಂಚಿತ ಸಂಭಾವನೆಯನ್ನು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 155 ವಿಸೇಬಿ 2012. ದಿನಾಂಕ: 16-12-2014.
2. ವಿಚಾರಣಾಧಿಕಾರಿಯವರ ವರದಿ ದಿನಾಂಕ.25-01-2015.

-------

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಶ್ರೀ ಟಿ.ಎನ್.ಕಮಲಾಕರ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ(ಪ್ರ), ತಾಲ್ಲೂಕು ಪಂಚಾಯತಿ, ಶಿವಮೊಗ್ಗ ಮತ್ತು ಶ್ರೀ ಎಸ್.ಟಿ.ಶಾಂತಪ್ಪ, ಹಿಂದಿನ ಕಾರ್ಯದರ್ಶಿ, ಅಬ್ಬಲಗೆರೆ ಗ್ರಾ.ಪಂ. ಶಿವಮೊಗ್ಗ ತಾಲ್ಲೂಕು ಇವರುಗಳು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದಾರೆ ಎನ್ನಲಾದ ಕರ್ತವ್ಯಲೋಪ/ದುರ್ನಡತೆ ಆರೋಪಗಳ ಕುರಿತಂತೆ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿಯಾಗಿ ಶ್ರೀ ಹೆಚ್.ವಿ.ರಾಮಚಂದ್ರರಾವ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ನೇಮಿಸಲಾಗಿತ್ತು. ಸದರಿಯವರು ಪ್ರಕರಣದ ಇಲಾಖಾ ವಿಚಾರಣೆಯನ್ನು ನಡೆಸಿ, ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿ: 25-1-2016 ರ ಪತ್ರದೊಂದಿಗೆ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಗಳಿಗೆ ಅವರ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 155 ವಿಸೇಬಿ 2012, ಬೆಂಗಳೂರು ದಿನಾಂಕ: 24-02-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಹೆಚ್.ವಿ.ರಾಮಚಂದ್ರರಾವ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು ಇವರಿಗೆ ಸರ್ಕಾರಿ ಆದೇಶ ಸಂ: ಸಿಆಸುಇ 6 ಸೇಇವಿ 2010 ದಿನಾಂಕ:28-04-2011ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 15,000/- (ಹದಿನೈದು ಸಾವಿರ ರೂಪಾಯಿಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ ಇವರು ಶ್ರೀ ಹೆಚ್.ವಿ.ರಾಮಚಂದ್ರರಾವ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸದರಿ ಮೊತ್ತವನ್ನು ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/2/16
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಪ್ರಧಾನ ಮಹಾಲೇಖಪಾಲರು(ಜಿ& ಎಸ್‌ಎಸ್‌ಎ)ರವರ ಕಾರ್ಯದರ್ಶಿ, ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5398, ಬೆಂಗಳೂರು-560001.

GO

2. ಪ್ರಧಾನ ಮಹಾಲೇಖಪಾಲರು(ಇ&ಆರ್‌ಎಸ್‌ಎ)ರವರ ಕಾರ್ಯದರ್ಶಿ, ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5329, ಬೆಂಗಳೂರು-560001.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ.
5. ಶ್ರೀ ಹೆಚ್.ವಿ.ರಾಮಚಂದ್ರರಾವ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ.ಎಸ್-8, 3ನೇ ಮಹಡಿ, ಪರ್ಲ್ಲಾನೇಸರ್,ಸೈಟ್ ಸಂ: 11, ಭೂಪಸಂದ್ರ ಮೈನ್,ನಾಗಶೆಟ್ಟಿ ಹಳ್ಳಿ, ಬೆಂಗಳೂರು-94.

<u>ಪ್ರತಿಯನ್ನು:-</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GO